# ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಷ್ ಲಿಮಿಟೆಡ್, ಮೈಸೂರು

ಕ್ರಮ ಸಂಖ್ಯೆ: ಮೈ.ಪೆ.ವಾಲಿ/ಆಡಳಿತ/2022-23/1250 ದಿನಾಂಕ: 26.09.2022

**ಅಧಿಸೂಚನೆ (ಎರಡನೇ ಕರೆ)**

**01.** ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಷ್ ಲಿ., ನೋಂದಾಯಿತ ಕಛೇರಿ, ನ್ಯೂ ಬನ್ನಿಮಂಟಪ ಬಡಾವಣೆ, ಮೈಸೂರು – 570015 (ಕರ್ನಾಟಕ ಸರ್ಕಾರದ ಅಧೀನ ಉದ್ಯಮ) ಇಲ್ಲಿ ಅನುಚ್ಛೇದ 371 (ಜೆ) ರಡಿಯಲ್ಲಿ ಮೀಸಲಿರಿಸಿರುವ ಮತ್ತು ಇತರೇ ಮೂಲ ವೃಂದದ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು, ಹಾಲಿ ಇರುವ ಎಂಪಿವಿಎಲ್ ವೃಂದ ಮತ್ತು ನೇಮಕಾತಿ ನಿಯಮಾವಳಿಗಳು, 2010, ಇದರ ಪ್ರಕಾರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**02.** ಹುದ್ದೆಗಳ ವಿವರ:

| ಕ್ರ.ಸಂ | ಹುದ್ದೆಯ ಹೆಸರು | ಗ್ರೂಪ್ | ಹುದ್ದೆಗಳ ಸಂಖ್ಯೆ | ವೇತನ ಶ್ರೇಣಿ | ಅನುಚ್ಛೇಧ 371 (ಜೆ) ರಡಿ ಹುದ್ದೆಗಳ ಸಂಖ್ಯೆ | ಮೂಲ ವೃಂದ | ಮೀಸಲಾತಿ ವರ್ಗೀಕರಣ |
|---|---|---|---|---|---|---|---|
| 01 | ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ) | ಎ | 01 | ರೂ. 56,800 – 80,100 | 01 | -- | ಪ.ಜಾ (ಇ) |
| 02 | ವ್ಯವಸ್ಥಾಪಕರು (ಲೆಕ್ಕಪತ್ರ) | ಎ | 01 | ರೂ. 42,000- 72,500 | 01 | -- | ಸಾ.ಅ (ಮ) |
| 03 | ಅಸಿಸ್ಟೆಂಟ್ ವರ್ಕ್ಸ್ ಮ್ಯಾನೇಜರ್ | ಸಿ | 01 | ರೂ. 20,900-51,400 | 01 | -- | ಪ್ರ.ವ II (ಬಿ) (ಇ) |
| 04 | ಸೀನಿಯರ್ ಕೆಮಿಸ್ಟ್ | ಸಿ | 01 | ರೂ. 20,900– 51,400 | -- | 01 | ಪ.ಜಾ (ಮ) |

(ಸೂಚನೆ: ಇದೇ ಅಧಿಸೂಚನೆಯ ಕಂಡಿಕೆ (4) (ಅ) ನ್ನು ಓದಿಕೊಳ್ಳುವುದು)

**03.** ಅರ್ಹ ಅಭ್ಯರ್ಥಿಗಳು ವೆಬ್ ಸೈಟ್ ನಲ್ಲಿ (ಅನುಬಂಧ-01 ರಲ್ಲಿ) ನೀಡಿರುವ ಅರ್ಜಿ ನಮೂನೆಯನ್ನು ಡೌನ್ ಲೋಡ್ ಮಾಡಿಕೊಂಡು ಸಂಬಂಧಿಸಿದ ದಾಖಲಾತಿಗಳೊಡನೆ ಈ ಕಛೇರಿಗೆ ಸಲ್ಲಿಸತಕ್ಕದ್ದು. ಅಭ್ಯರ್ಥಿಗಳು ಸೂಚನೆಗಳು, ಷರತ್ತು ನಿಬಂಧನೆಗಳನ್ನು ಪ್ರತ್ಯೇಕವಾಗಿ ಪ್ರಿಂಟ್ ತೆಗೆದುಕೊಂಡು ಕಡ್ಡಾಯವಾಗಿ, ತಾಳ್ಮೆಯಿಂದ ಓದಿ ಅರ್ಥೈಸಿಕೊಂಡ ನಂತರವೇ ಅರ್ಜಿಗಳನ್ನು ಸಲ್ಲಿಸುವುದು. ಅರ್ಜಿಯಲ್ಲಿ ನೀಡಿರುವ ಮಾಹಿತಿಯನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಬದಲಾವಣೆ ಕೋರಿ ಖುದ್ದಾಗಿ ಬಂದು ಭೇಟಿ ಮಾಡುವಂತಿಲ್ಲ, ಒತ್ತಾಯಿಸುವಂತಿಲ್ಲ. ಆದ್ದರಿಂದ ಅಭ್ಯರ್ಥಿಗಳು ಷರತ್ತು-ನಿಬಂಧನೆಗಳು-ಸೂಚನೆಗಳನ್ನು ಓದಿ ಅರ್ಥೈಸಿಕೊಂಡ ನಂತರವೇ ಅರ್ಜಿ ಸಲ್ಲಿಸತಕ್ಕದ್ದು.

3.1- ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುವವರು ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಬೇಕು.

3.2- ಕೊನೆಯ ದಿನಾಂಕದ ನಂತರ ಬರುವ/ಸ್ವೀಕರಿಸಲ್ಪಡುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ತಿರಸ್ಕರಿಸಲಾಗುವುದು.

ಮುಂದುವರೆದಿದೆ . . . . . . . .02

3.3- ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳ ವಿರುದ್ಧ ಕಾನೂನಿನನ್ವಯ ಕ್ರಮ ಜರುಗಿಸಲು ಕಂಪನಿಯು ಅಧಿಕಾರಯುತವಾಗಿರುತ್ತದೆ.

3.4- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನದವರೆಗೂ ಕಾಯದೇ ಸಾಕಷ್ಟು ಮುಂಚಿತವಾಗಿ ಸಲ್ಲಿಸತಕ್ಕದ್ದು. ಕೊನೆಯ ದಿನದಲ್ಲಿ ಆಗುವ ತಾಂತ್ರಿಕ ಅಡಚಣೆಗಳಿಗೆ ಕಂಪನಿಯು ಜವಾಬ್ದಾರಿಯಾಗುವುದಿಲ್ಲ.

3.5- * ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ: 27.09.2022.
* ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 26.10.2022.

04. ಅರ್ಹತಾ ಷರತ್ತುಗಳು

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅನುಚ್ಛೇಧ 371 (ಜೆ) ರಡಿ ಮೀಸಲಿರಿಸಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಲಿಚ್ಛಿಸುವ ಅಭ್ಯರ್ಥಿಯು ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳಿಗೆ ಸೇರಿದವರಾಗಿರಬೇಕು. ಈ ಬಗ್ಗೆ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಬಾದ್ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013 ರ ನಿಯಮಗಳಿಗೆ ಒಳಪಟ್ಟಿರಬೇಕು.

ಇ) 'ಮೂಲ ವೃಂದ' ಹುದ್ದೆಗೆ ಕಲ್ಯಾಣ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳೂ ಸೇರಿದಂತೆ ಎಲ್ಲಾ ಪ್ರದೇಶದ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಈ) ಅಭ್ಯರ್ಥಿಗಳು ಮಾನಸಿಕವಾಗಿ, ದೈಹಿಕವಾಗಿ ಆರೋಗ್ಯವಂತರಾಗಿರಬೇಕು. ನಿಗದಿತ ಹುದ್ದೆಯ ಸಮರ್ಪಕ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

ಉ) ಇದೇ ಅಧಿಸೂಚನೆಯಲ್ಲಿ ವಿಧಿಸಲಾಗಿರುವ ಶೈಕ್ಷಣಿಕ ಅರ್ಹತೆ, ಅನುಭವ, ಮತ್ತು ಇತರೇ ಷರತ್ತುಗಳಿಗೆ ಒಳಪಟ್ಟಿರಬೇಕು.

ಊ) ಮೇಲಿನ ಎಲ್ಲಾ ಹುದ್ದೆಗಳಿಗೂ ಕಂಪ್ಯೂಟರ್ ಬಳಕೆ, ಜ್ಞಾನ ಕಡ್ಡಾಯ.

05. ಶೈಕ್ಷಣಿಕ ವಿದ್ಯಾರ್ಹತೆ/ಅನುಭವ

| Sl. No. | Name of the Post | Minimum Qualification and Experience |
|---|---|---|
| 01 | General Manager (Tech) | M.Sc (Paint Technology) with 05 years' experience in any Paint Industry |
| 02 | Accounts Manager | MBA (Finance ) or M.Com or ICWA with 3 to 5 years experience in managerial capacity and should be able to handle finalization of Accounts, Finance, Costing, Budget and Tax related matters. |

ಮುಂದುವರೆದಿದೆ . . . . . . . .03

| | | |
|---|---|---|
| 03 | Asst. Work Manager | B.Sc (Chem.) with 7 years experience in Paint Industry or Diploma in Paint Technology with 02 years experience in a Paint industry. |
| 04 | Senior Chemist | B.Sc(Chem.) with 5to 6 years experience in the line or Diploma-in-Paint Technology with 2 to 3 years experience in any paint industry |

(ಸೂಚನೆ: ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗದಿತ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ)

## 06. ವಯೋಮಿತಿ

ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಈ ಕೆಳಕಂಡಂತೆ ಕನಿಷ್ಟ 21 ವರ್ಷ ವಯೋಮಿತಿಯನ್ನು ಹೊಂದಿರಬೇಕು ಮತ್ತು ಗರಿಷ್ಟ ವಯೋಮಿತಿಯನ್ನು ಈ ಕೆಳಗೆ ನೀಡಿರುವಂತೆ ಮೀರಿರಬಾರದು.

| | | | |
|---|---|---|---|
| 6.01- | ಸಾಮಾನ್ಯ ವರ್ಗ | - | 35 ವರ್ಷ |
| 6.02- | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರ.ವರ್ಗ-1 | - | 40 ವರ್ಷ |
| 6.03- | ಪ್ರ.ವರ್ಗ 2(ಎ)/ಪ್ರ.ವರ್ಗ 2 (ಬಿ)/ಪ್ರ.ವರ್ಗ-3 (ಬಿ) | - | 38 ವರ್ಷ |
| 6.04- | ಅರ್ಹ ಮಾಜಿ ಸೈನಿಕ ಅಭ್ಯರ್ಥಿಗಳು | - | ಭಾರತೀಯ ಸೇನೆಯಲ್ಲಿ ಸಲ್ಲಿಸಿರುವ ಸೇವೆಯ ಒಟ್ಟು ವರ್ಷಗಳ ಜೊತೆಗೆ 03 ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು. |

ಸಾಮಾನ್ಯ ನೇಮಕಾತಿ ನಿಯಮಗಳನುಸಾರ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| ಅ | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| ಆ | ನ್ಯಾಷನಲ್ ಕ್ಯಾಡೆಟ್ ಕೋರ್ ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ. | ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು. |
| ಇ | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ. | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |

ಮುಂದುವರೆದಿದೆ . . . . . . . .04

| | | |
|---|---|---|
| ಈ | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| ಉ | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ. | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| ಊ | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| ಋ | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

**07. ಭಾಷಾ ಜ್ಞಾನ**

ಅಭ್ಯರ್ಥಿಗಳಿಗೆ ಕನ್ನಡ ಓದಲು, ಬರೆಯಲು ಮತ್ತು ಮಾತನಾಡುವುದು ಕಡ್ಡಾಯ ಮತ್ತು ಇಂಗ್ಲೀಷ್/ಹಿಂದೀ ಭಾಷೆ ಮಾತನಾಡುವುದು/ಬರೆಯುವಿಕೆ ಅಪೇಕ್ಷಣೀಯ.

**08. ಮೀಸಲಾತಿ**

ಮೀಸಲಾತಿ ಕೋರುವ ಅಭ್ಯರ್ಥಿಗಳು ಈ ಕೆಳಗಿನಂತೆ ಸಂಬಂಧಿತ ತಹಶೀಲ್ದಾರ್ ರವರಿಂದ ಪ್ರಮಾಣ ಪತ್ರ ಪಡೆದು ಲಗತ್ತಿಸಬೇಕು.

8.1- ಪ.ಜಾ/ಪ.ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ರೀತ್ಯಾ.

8.2- ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ' ರೀತ್ಯಾ.

8.3- ಪ್ರವರ್ಗ 3ಎ, 3ಬಿ/2ಎ, 2ಬಿ ಅಭ್ಯರ್ಥಿಗಳು ನಮೂನೆ 'ಎಫ್' ರೀತ್ಯಾ

(ಸೂಚನೆ: ಮೀಸಲಾತಿಯಡಿ ಆಯ್ಕೆ ಹೊಂದುವ ಅಭ್ಯರ್ಥಿಗಳ ಜಾತಿ/ಆದಾಯ ಪ್ರಮಾಣ ಪತ್ರಗಳು ಸಕ್ಷಮ ಪ್ರಾಧಿಕಾರಗಳು ನೀಡುವ ಸಿಂಧುತ್ವಕ್ಕೆ ಒಳಪಟ್ಟಿರುತ್ತದೆ)

ಮುಂದುವರೆದಿದೆ . . . . . . . .05

## ಇತರೇ ಸಾಮಾನ್ಯ ಷರತ್ತುಗಳು

### 09. ಗ್ರಾಮೀಣ ಅಭ್ಯರ್ಥಿ

- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.

- ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2 ರಲ್ಲಿ ಸಿಂಧುವಾಗಿರುವ (valid) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2 ರ ಮಿಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1 ರಲ್ಲಿ ಅವರು ಮೇಲುಪದರಕ್ಕೆ (creamy-layer) ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದು ಹೊಂದಿರತಕ್ಕದ್ದು.

(**ಸೂಚನೆ:** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2 ರ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು)

### 10. ಕನ್ನಡ ಮಾಧ್ಯಮ ಅಭ್ಯರ್ಥಿ

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು.

### 11. ಯೋಜನಾ ನಿರಾಶ್ರಿತ ಅಭ್ಯರ್ಥಿ

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99, ದಿನಾಂಕ: 23.11.2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸತಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

ಮುಂದುವರೆದಿದೆ . . . . . . . .06

12. <u>ಅನುಚ್ಛೇಧ 371 (ಜೆ) ರಡಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ.</u>

ಕರ್ನಾಟಕ ಸಾರ್ವಜನಿಕ ಉದ್ಯೋಗ (ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013 ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನುಬಂಧ-'ಎ' ರಲ್ಲಿ ಸೂಚಿಸಿರುವ ನಮೂನೆಯಲ್ಲಿಯೇ ಅರ್ಹತಾ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ-ವಿಭಾಗದ ಸಹಾಯಕ ಆಯುಕ್ತರಿಂದ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಈ ಪ್ರಮಾಣ ಪತ್ರದ ನಮೂನೆಯನ್ನು ಅನುಬಂಧ-ಸಿ ರಡಿಯಲ್ಲಿ ಅರ್ಹತಾ ಪ್ರಮಾಣ ಪತ್ರವನ್ನು ತೋರಿಸಲಾಗಿದೆ. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಯಲ್ಲಿ ಪಡೆಯಲಾದ ಅರ್ಹತಾ ಪ್ರಮಾಣ ಪತ್ರವನ್ನು ತಿರಸ್ಕರಿಸಲಾಗುವುದು.

13. <u>ಕಲ್ಯಾಣ ಕರ್ನಾಟಕ ಮೀಸಲಾತಿ ಕೋರುವ ಸರ್ಕಾರಿ ನೌಕರರು</u>

ಈ ಮೀಸಲಾತಿ ಕೋರುವ ಅಭ್ಯರ್ಥಿಗಳು ಅರ್ಹತಾ ಪ್ರಮಾಣ ಪತ್ರದ ಜೊತೆಗೆ ಸ್ವ-ಗ್ರಾಮ ಪ್ರಮಾಣ ಪತ್ರವನ್ನು, ಕಲ್ಯಾಣ-ಕರ್ನಾಟಕ ಉಪ-ನಿಯಮ 5 (2) ರಂತೆ ನೇಮಕಾತಿ ಪ್ರಾಧಿಕಾರಿಗಳಿಂದ ನಿರಾಪೇಕ್ಷಣಾ (NOC) ಪತ್ರವನ್ನು ಪಡೆದಿಟ್ಟುಕೊಂಡು, ಆಯೋಗವು ಅಪೇಕ್ಷಿಸಿದಲ್ಲಿ ಸಲ್ಲಿಸತಕ್ಕದ್ದು.

(ಟಿಪ್ಪಣಿ: ವಿವಿಧ ಮೀಸಲಾತಿ ಕೋರಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರುಪಡಿಸದಿದ್ದಲ್ಲಿ: ಆ ಮೀಸಲಾತಿಯನ್ನು ರದ್ದುಪಡಿಸಲಾಗುತ್ತದೆ. ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ, ಸಾಮಾನ್ಯ ಅರ್ಹತೆಯೆಂದು ಪರಿಗಣಿಸಲಾಗುವುದು, ಇಲ್ಲವಾದಲ್ಲಿ ಅಭ್ಯರ್ಥಿಯನ್ನು ರದ್ದುಪಡಿಸಲಾಗುವುದು.)

14. <u>ಮಾಜಿ ಸೈನಿಕ</u>

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿದ್ದಂತೆ ಮಾಜಿ ಸೈನಿಕರ ವಿವರಣೆ ಕೆಳಕಂಡಂತಿದೆ:

1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

ಮುಂದುವರೆದಿದೆ . . . . . . . .07

2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮಿಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ಅಥವಾ

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವನ. ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ. ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

i) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

(ವಿವರಣೆ:- ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು / ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ/ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೆ ಹಾಜರುಪಡಿಸಬೇಕು. ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.

ಮುಂದುವರೆದಿದೆ . . . . . . . .08

(ವಿವರಣೆ: ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು/ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಕೊಲ್ಲಲ್ಪಟ್ಟಿರುವ/ಶಾಶ್ವತವಾಗಿ ಅಂಗವಿಕಲರಾದ ಬಗ್ಗೆ ಪ್ರಮಾಣ ಪತ್ರವನ್ನು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೆ ಹಾಜರುಪಡಿಸಬೇಕು. ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.)

(ಟಿಪ್ಪಣಿ: ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ದಿನಾಂಕವನ್ನು ಅರ್ಜಿಯಲ್ಲಿ ನಮೂದಿಸಬೇಕು ಹಾಗೂ ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಅದನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.)

## 15. <u>ವಿಕಲಚೇತನ ಅಭ್ಯರ್ಥಿ</u>

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್.ಆರ್.ಆರ್ 2000 ದಿನಾಂಕ: 03.09.2005 ಇದರನ್ವಯ ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005 ದಿನಾಂಕ: 19.11.2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿ ಹೆಚ್ ಪಿ 2010 ದಿನಾಂಕ: 18.02.2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ವಿಕಲಚೇತನ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ)

## 16. <u>ಸೇವಾನಿರತ ಅಭ್ಯರ್ಥಿ:</u>

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 5 (4) ರನ್ವಯ "ಯಾರೇ ಅರ್ಜಿದಾರನು ತಾನು ಅರ್ಜಿ ಸಲ್ಲಿಸುವ ಸಮಯದಲ್ಲಿ ಸರ್ಕಾರದ ಯಾವುದೇ ಇತರೆ ಇಲಾಖೆಯಲ್ಲಿ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಈ ಸಂಬಂಧವಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಯಾವುದೇ

ಮುಂದುವರೆದಿದೆ . . . . . . . .09

ಇತರ ಪ್ರಾಧಿಕಾರದಲ್ಲಿ ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದರೆ ಮತ್ತು ಆತನು ಯಾರ ಅಧೀನದಲ್ಲಿ ಉದ್ಯೋಗದಲ್ಲಿರುವನೋ ಆ ಇಲಾಖಾ ಮುಖ್ಯಸ್ಥರಿಂದ ಅಥವಾ ಸಂದರ್ಭಾನುಸಾರ ಸರ್ಕಾರದಿಂದ ಅಥವಾ ಪ್ರಾಧಿಕಾರದಿಂದ ಒಪ್ಪಿಗೆ ಪಡೆಯದೆಯೇ ಅರ್ಜಿಯನ್ನು ಸಲ್ಲಿಸಿದ್ದರೆ ಆತನು ಸರ್ಕಾರದ ಯಾವುದೇ ಇಲಾಖೆಯಲ್ಲಿನ ಹುದ್ದೆಯ ನೇಮಕಕ್ಕೆ ಅರ್ಹರಾಗಿರುವುದಿಲ್ಲ. ಪರಂತು, ಈ ಉಪ ನಿಯಮವು ಸರ್ಕಾರದ ಯಾವುದೇ ಇಲಾಖೆಯಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ನೇಮಕಗೊಂಡಿರುವ ವ್ಯಕ್ತಿಗೆ ಅವನನ್ನು ಎಲ್ಲಿಯವರೆಗೆ ಹಾಗೆಂದು ಪರಿಗಣಿಸಲಾಗುವುದೋ ಅಲ್ಲಿಯವರೆಗೆ ಅನ್ವಯವಾಗುವುದಿಲ್ಲ"

ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಸಕ್ಷಮ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರ (NOC) ಪಡೆದಿಟ್ಟುಕೊಂಡಿರತಕ್ಕದ್ದು. ಇದೇ ಪ್ರಮಾಣ ಪತ್ರದ ಪ್ರತಿಯನ್ನು ಮೂಲ ದಾಖಲೆಗಳ ಪರಿಶೀಲನೆಯ

ಸಮಯದಲ್ಲಿ ತಪ್ಪದೇ ಹಾಜರುಪಡಿಸತಕ್ಕದ್ದು. ನೀರಾಕ್ಷೇಪಣಾ ಪ್ರಮಾಣ ಪತ್ರವನ್ನು (NOC) ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ರದ್ದುಗೊಳಿಸಲಾಗುವುದು. ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯಲ್ಲಿ ಅಳವಡಿಸಲಾಗಿದೆ.

ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ದಿನಾಂಕವನ್ನು ಅರ್ಜಿಯಲ್ಲಿ ನಮೂದಿಸಬೇಕು ಹಾಗೂ ಮೂಲ ದಾಖಲೆಗಳ ಪರಿಶೀಲನ ಸಮಯದಲ್ಲಿ ಅದನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.

**17.** ಮೇಲಿನ ಅಧಿಸೂಚನೆಯನ್ನು ಯಾವುದೇ ಹಂತದಲ್ಲಿ ಯಾವುದೇ ಪೂರ್ವ ಸೂಚನೆಯಿಲ್ಲದೆ ಮುಂದೂಡುವ ಅಥವಾ ರದ್ದುಪಡಿಸುವ ಹಕ್ಕನ್ನು ಕಂಪನಿಯು ಕಾಯ್ದಿರಿಸಿಕೊಂಡಿರುತ್ತದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಹಕ್ಕನ್ನು ಸಹಾ ಕಂಪನಿಯ ಕಾಯ್ದಿರಿಸಿಕೊಂಡಿರುತ್ತದೆ.

**18.** ಈ ಅಧಿಸೂಚನೆಯಲ್ಲಿ ಬಳಸಲಾಗಿರುವ ಸಂಕ್ಷಿಪ್ತ ನಾಮ (Abbreviation) ಗಳ ವಿವರಣೆಗಳು:

ಅ) 'ಕಂಪನಿ ಅಂದರೆ "ಮೈಸೂರು ಪೇಯಿಂಟ್ಸ್ & ವಾರ್ನಿಷ್ ಲಿ.,"

ಆ) ಅನುಚ್ಛೇಧ 371 (ಜೆ) ಅಂದರೆ 'ಕಲ್ಯಾಣ-ಕರ್ನಾಟಕ ಪ್ರದೇಶದ ಜಿಲ್ಲೆಗಳಾದ "ಬೀದರ್, ಯಾದಗಿರಿ, ರಾಯಚೂರು, ಕೊಪ್ಪಳ, ಕಲಬುರುಗಿ ಮತ್ತು ಬಳ್ಳಾರಿ" ಜಿಲ್ಲೆಗಳು ಎಂದರ್ಥ.

ಇ) ಪ.ಜಾ (ಪರಿಶಿಷ್ಟ ಜಾತಿ), ಪ.ವ (ಪರಿಶಿಷ್ಟ ವರ್ಗ), ಪ್ರ.ವ-1 (ಪ್ರವರ್ಗ-1), ಪ.ವ-2 (ಪ್ರವರ್ಗ-2), ಪ್ರ.ವ 2ಎ (ಪ್ರವರ್ಗ – 2ಎ), ಪ್ರ.ವ 2ಬಿ (ಪ್ರವರ್ಗ – 2ಬಿ), ಪ್ರ.ವ 3ಎ (ಪ್ರವರ್ಗ – 3ಎ), ಪ್ರ.ವ 3ಬಿ (ಪ್ರವರ್ಗ – 3ಬಿ), ಯೋ.ನಿ (ಯೋಜನಾ ನಿರಾಶ್ರಿತ ಅಭ್ಯರ್ಥಿ), ಮಾ.ಸೈ (ಮಾಜಿ ಸೈನಿಕ), ವಿ.ಚೇ (ವಿಕಲ ಚೇತನ), ಕ.ಮಾ (ಕನ್ನಡ ಮಾಧ್ಯಮ), ಗ್ರಾ (ಗ್ರಾಮೀಣ ಅಭ್ಯರ್ಥಿ) ಇ (ಇತರೇ) ಮತ್ತು ಮ (ಮಹಿಳಾ ಅಭ್ಯರ್ಥಿ)

**ವ್ಯವಸ್ಥಾಪಕ ನಿರ್ದೇಶಕರು**

**(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

## ನಮೂನೆ – ಡಿ

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

## ಪ್ರಮಾಣ ಪತ್ರ

........................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ / ವಿಭಾಗದ ................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................ ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ............................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ......................................................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ ............................................................ ಜಿಲ್ಲಾ/ವಿಭಾಗದ ..........................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ..........................................................

ತಹಶೀಲ್ದಾರ್...........................................

ಸ್ಥಳ :
ದಿನಾಂಕ:

ಪದನಾಮ
ಕಛೇರಿಯ ಮೊಹರಿನೊಂದಿಗೆ

M.P.V.L. MYSORE.

**ರಾಜ್ಯ /ಕೇಂದ್ರಾಡಳಿತ ಪ್ರದೇಶ ***

*** ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ**

**ಸೂಚನೆ:** ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

M.P.V.L. MYSORE

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

# ನಮೂನೆ – ಇ

(ನಿಯಮ 3ಎ (2) (3) ನೋಡಿ)

## ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

ಗ್ರಾಮ / ಪಟ್ಟಣದ / ನಗರ
ನಿವಾಸಿಯಾದ ಶ್ರೀ / ಶ್ರೀಮತಿ ಇವರ ಮಗ
/ ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ಇವರು
ಹಿಂದುಳಿದ ವರ್ಗಗಳ (ಪ್ರವರ್ಗ) ಜಾತಿಯ
ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್

ದಿನಾಂಕ : ---------------ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

## ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಮಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

***ಅಥವಾ***

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

***ಅಥವಾ***

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

***ಅಥವಾ***

ಆತನ / ಅಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎರಡು ಲಕ್ಷಮೀರುವುದಿಲ್ಲವೆಂದು;

***ಅಥವಾ***

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ ಇವರು ಜಾತಿಗೆ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

**ಸ್ಥಳ :**
**ದಿನಾಂಕ:**

**ತಹಶೀಲ್ದಾರ್**
**------------ತಾಲ್ಲೂಕು**
**ಕಛೇರಿಯ ಮೊಹರು**

M.P.V.L. MYSORE

# ನಮೂನೆ – 2

<u>*ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ*</u>

ಶ್ರೀ/ಶ್ರೀಮತಿ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು
ಕ್ಷೇತ್ರ ಶಿಕ್ಷಣ ಅಧಿಕಾರಿ
ಕಛೇರಿಯ ಮೊಹರು

ಸಹಿ
ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ :

M.P.V.L.
MYSORE.

## ನಮೂನೆ – 1

### ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು
ತಾಲ್ಲೂಕು
ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ಎಂಬುವವರ ಮಗ / ಮಗಳು / ಪತಿ / ಪತ್ನಿ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :

   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)

5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)

6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ

8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?

10. ಸಂಪತ್ತು ತೆರಿಗೆ ಪಾವತಿದಾರರೇ?

11. ಮಾರಾಟ ತೆರಿಗೆ ಪಾವತಿದಾರರೇ?

M.P.V.L. MYSORE.

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ
ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ

ಸ್ಥಳ: ತಂದೆ/ತಾಯಿ/ಪೋಷಕರ ಸಹಿ
ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

### ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

### ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ಎಂಬುವವರು ಕರ್ನಾಟಕ ರಾಜ್ಯದ ಜಿಲ್ಲೆಯ ವಿಭಾಗ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್
ದಿನಾಂಕ: ತಾಲ್ಲೂಕು
**ಕಛೇರಿಯ ಮೊಹರು**

| |
|---|
| **ಸೂಚನೆ–1 : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.** |
| **ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು** |

M.P.V.L. MYSORE

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ನೇ ತರಗತಿಯಿಂದ ನೇ ತರಗತಿಯವರೆಗೆ ಶೈಕ್ಷಣಿಕ ವರ್ಷದಿಂದ ಶೈಕ್ಷಣಿಕ ವರ್ಷದವರೆಗೆ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ: ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

M.P.V.L. MYSORE.

## ಅನುಬಂಧ — ಎ

### ಸ್ವಗ್ರಾಮ ಪ್ರಮಾಣಪತ್ರ
[ಅನುಚ್ಛೇದ 371 (ಜೆ) ಮೇರೆಗೆ]
(5 (2)ನೇ ನಿಯಮ ನೋಡಿ)

[ಪ್ರಮಾಣಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ/ ಶ್ರೀಮತಿ ------------------ ರವರು ------------------ ರವರ ಮಗ/ ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ------------------ ಜಿಲ್ಲೆಯ ---------------- ತಾಲ್ಲೂಕಿನ, ------------------ ಗ್ರಾಮ/ ಪಟ್ಟಣವನ್ನು ತನ್ನ ಸೇವಾ ಪುಸ್ತಕದಲ್ಲಿ ತನ್ನ ಸ್ವಗ್ರಾಮ/ ಸ್ಥಳ ಎಂದು ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶೀಲಿಸಿದ್ದೇನೆ ಮತ್ತು ಮೇಲಿನ ನಮೂದು 01-01-2013ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ಇತ್ತೆಂದು ಸ್ವತಃ ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ: ------------------
ದಿನಾಂಕ: ------------------

ಹೆಸರು ------------------
ಪದನಾಮ ---------------
ಕಛೇರಿ ---------------
ಇಲಾಖೆ ---------------

## ಅನುಬಂಧ — ಬಿ

### ಅರ್ಹತಾ ಪ್ರಮಾಣಪತ್ರ
[ಅನುಚ್ಛೇದ 371 (ಜೆ) ಮೇರೆಗೆ]
(5 (3)ನೇ ನಿಯಮ ನೋಡಿ)

[ಪ್ರಮಾಣಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

ಶ್ರೀ/ ಶ್ರೀಮತಿ ------------------ ರವರು ------------------ ರವರ ಮಗ/ ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ---------------- ಜಿಲ್ಲೆಯ ---------------- ತಾಲ್ಲೂಕಿನ ------------------ ಗ್ರಾಮ/ ಪಟ್ಟಣದ ಒಬ್ಬ ಸ್ಥಳೀಯ ವ್ಯಕ್ತಿಯಾಗಿರುತ್ತಾರೆ.

ಸ್ಥಳ: ------------------
ದಿನಾಂಕ: ------------------

ಹೆಸರು ------------------
ಅಸಿಸ್ಟೆಂಟ್ ಕಮೀಷನರ್
------------ ಉಪ ವಿಭಾಗ
------------ ಜಿಲ್ಲೆ

M.P.V.L. MYSORE

## ಅನುಬಂಧ–ಸಿ

## ಸ್ಥಳೀಯ ವೃಂದದ ಸೇರಿಕೆಗಾಗಿ ಅರ್ಜಿ

(371 (ಜೆ) ಅನುಚ್ಛೇದದ ಮೇರೆಗೆ)
(6ನೇ ನಿಯಮ ನೋಡಿ)

[ಸ್ಥಳೀಯ ರಚನೆ, ವೃಂದಗಳು, ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗದಲ್ಲಿ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು, 2013]

1. ಸ್ಥಳೀಯ ವೃಂದದ ಹೆಸರು : ............................................
2. ಇಲಾಖೆ : ............................................
3. ಜಿಲ್ಲೆ (ಸಂಬಂಧಿಸಿದ್ದರೆ) : ............................................
4. ಅರ್ಜಿದಾರನ ಹೆಸರು : ............................................
5. ಪ್ರಸ್ತುತ ಹುದ್ದೆಯಲ್ಲಿರುವ ಸ್ಥಳ : ............................................
6. ಹುದ್ದೆಯ ಹೆಸರು (ಪದನಾಮ) : ............................................

ನಾನು ಈ ಮೇಲೆ ಹೇಳಿದ ವೃಂದವನ್ನು ಸೇರಲು ಇಚ್ಛಿಸುವುದಾಗಿ ಮನವಿ ಮಾಡುತ್ತೇನೆ. ನಾನು ಸ್ಥಳೀಯ ವ್ಯಕ್ತಿಯಾಗಿದ್ದು ನನ್ನ ಕ್ಲೇಮಿನ ರುಜುವಾತಾಗಿ ನನ್ನ ಸ್ವಗ್ರಾಮ/ಅರ್ಹತಾ ಪ್ರಮಾಣ ಪತ್ರವನ್ನು ಈ ಮೂಲಕ ಲಗತ್ತಿಸಿದ್ದೇನೆ.

ಸ್ಥಳ: ....................................

ದಿನಾಂಕ: ....................................

ಹೆಸರು: ....................................

ವಿಳಾಸ: ....................................

....................................

....................................

ಮೊಬೈಲ್ ಸಂಖ್ಯೆ: ....................................

M.P.V.L. MYSORE

**ಅನುಬಂಧ - 1**

**ಮೈಸೂರು ಪೇಯಿಂಟ್ಸ್ & ವಾರ್ನಿಷ್ ಲಿ.,**

**(ಕರ್ನಾಟಕ ಸರ್ಕಾರದ ಅಧೀನ ಉದ್ಯಮ)**

**ನೋಂದಾಯಿತ ಕಛೇರಿ : ನ್ಯೂ ಬನ್ನಿಮಂಟಪ ಬಡಾವಣೆ, ಮೈಸೂರು – 570015**

---

ಕ್ರಮ ಸಂಖ್ಯೆ: ಮೈಪೆವಾಲಿ/ಆಡಳಿತ/2022-23/1250 ದಿನಾಂಕ: 26.09.2022

**ಅರ್ಜಿ ನಮೂನೆ**

ಭಾವಚಿತ್ರ

**ಅರ್ಜಿ ಸಲ್ಲಿಸಲು ಇಚ್ಛಿಸುವ ಹುದ್ದೆ/** POST APPLIED FOR: …………………………………………..

| | | |
|---|---|---|
| 1 | ಅರ್ಜಿದಾರರ ಹೆಸರು<br>Name of the Applicant | |
| 2 | **ತಂದೆ/ಗಂಡನ ಹೆಸರು**<br>Name of the Father/Husband | |
| 3 | ಲಿಂಗ/Gender | |
| 4 | ಜನ್ಮ ದಿನಾಂಕ **(ದಿನಾಂಕ:ತಿಂಗಳು:ವರ್ಷ)**<br>Date of Birth (DD/MM/YYYY) | |
| 5 | **ವಯಸ್ಸು** / Age | |
| 6 | **ಜಾತಿ/Caste** | |
| 7 | **ಖಾಯಂ ವಿಳಾಸ**<br>Permanent postal address | |

ಪು.ತಿ.ನೋ

| | | |
|---|---|---|
| 8 | ಪ್ರಸ್ತುತ ವಿಳಾಸ<br>Present postal address | |
| 9 | ದೂರವಾಣಿ ಸಂಖ್ಯೆ/**Telephone No.** | |
| 10 | ಮೊಬೈಲ್ ಸಂಖ್ಯೆ/Mobile No. | |
| 11 | ಇ-ಮೇಲ್/E-mail | |

## ಶೈಕ್ಷಣಿಕ ಅರ್ಹತೆ/EDUCATIONAL QUALIFICATIONS:

| ಕ್ರ.ಸಂ **SL. NO.** | ವಿದ್ಯಾರ್ಹತೆ **QUALIFICATION** | ಸೆಮಿಸ್ಟರ್/ ವರ್ಷ **SEMESTER / YEAR** | ತೇರ್ಗಡೆಗೊಂಡ ದಿನಾಂಕ **YEAR OF PASSING** | ಗರಿಷ್ಠ ಅಂಕಗಳು **MAXIMUM MARKS** | ಪಡೆದ ಅಂಕಗಳು **MARKS OBTAINED** | ಶೇಕಡಾವಾರು ಅಂಕಗಳು **% OF MARKS** |
|---|---|---|---|---|---|---|
| 01 | | | | | | |
| 02 | | | | | | |
| 03 | | | | | | |
| 04 | | | | | | |

## ಅನುಭವದ ವಿವರಗಳು/EXPERIENCE:

| ಕ್ರ.ಸಂ **SL. NO.** | ಸಂಸ್ಥೆಯ ಹೆಸರು **ORGANISATION*** | ಪದನಾಮ **DESIGNATION** | ಅವಧಿ **DURATIONS** | | ಒಟ್ಟು ಅನುಭವ **TOTAL EXPERIENCE** | |
|---|---|---|---|---|---|---|
| | | | ಇಂದ **FROM** | ವರೆಗೆ **TO** | ವರ್ಷ **YEAR** | ತಿಂಗಳು **MONTHS** |
| 01 | | | | | | |
| 02 | | | | | | |

ಪು.ತಿ.ನೋ

| | | | | | | |
|---|---|---|---|---|---|---|
| 03 | | | | | | |
| 04 | | | | | | |

(*ಅನುಭವ ಹೊಂದಿದ ಪ್ರಮಾಣಪತ್ರದ ಧೃಡೀಕೃತ/ಮೊಹರು/ಸಹಿ ಇರುವ ನಕಲನ್ನು ಸಂಬಂಧಿತ ಸಂಸ್ಥೆಯಿಂದ ಪಡೆದು ಲಗತ್ತಿಸತಕ್ಕದ್ದು/experience certificate duly signed/sealed by the appropriate authority be enclosed)

ಸ್ಥಳ/PLACE :

ದಿನಾಂಕ/DATE:

ಅಭ್ಯರ್ಥಿಯ ಸಹಿ/

SIGNATURE OF THE CANDIDATE

ಸೂಚನೆ: ಸ್ವಯಂ ಧೃಡೀಕೃತ ಲಗತ್ತುಗಳು

ಅ) ಅಂಕಪಟ್ಟಿಗಳು/ Marks cards of all semesters

ಆ) ಶೈಕ್ಷಣಿಕ ಅರ್ಹತಾ ಪ್ರಮಾಣ ಪತ್ರ/ Educational qualifications certificates

ಇ) ಅನುಭವ ಪ್ರಮಾಣಪತ್ರ/ Experience certificates

ಈ) ಇತರೇ/other